**Akashvani : Bangalore**
**Regional Bulletin In Kannada**
**29.12.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**29.12.2025 / 14.30 hrs**

**<><*<><>*><>**

ಮುಖ್ಯಾಂಶಗಳು

**೧. 'ಸಿಎಂ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆ' ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಪ್ರಗತಿ ಪರಿಶೀಲನಾ ಸಭೆ**

**೨. ದೇಶೀಯ ಡಿಜಿಟಲ್ ಸಂವಹನ ವ್ಯವಸ್ಥೆ ವಿನ್ಯಾಸ ಹಾಗೂ ಅಭಿವೃದ್ಧಿಗಾಗಿ ಬೆಂಗಳೂರಿನಲ್ಲಿರುವ ವಾಯುಪಡೆ ತಂತ್ರಾಂಶ ಅಭಿವೃದ್ಧಿ- ಮದ್ರಾಸ್ ಐಐಟಿ ನಡುವೆ ಒಪ್ಪಂದ**

**೩. ವಿಕಸಿತ ಭಾರತ 'ಜಿ ರಾಮ್ ಜಿ' ಕಾಯ್ದೆಯಿಂದ ರಾಜ್ಯಗಳಿಗೆ ನಿಧಿ ಹೆಚ್ಚಾಗುವ ನಿರೀಕ್ಷೆ -ಎಸ್‌ಬಿಐ ವರದಿ**

**೪. ವಿಶ್ವಮಾನವ ಸಂದೇಶ ಸಾರಿದ ಜ್ಞಾನಪೀಠ ಪುರಸ್ಕೃತ ಕುವೆಂಪು ಜಯಂತಿ ಸಂದರ್ಭದಲ್ಲಿ ಗಣ್ಯರ ಗೌರವಾರ್ಪಣೆ**

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಗೃಹ ಕಚೇರಿ ಕೃಷ್ಣಾದಲ್ಲಿಂದು 'ಸಿಎಂ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆ' ಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸಚಿವರಾದ ಎಚ್.ಕೆ.ಪಾಟೀಲ್, ಎಂ.ಬಿ.ಪಾಟೀಲ್, ಕೆ.ಎಚ್.ಮುನಿಯಪ್ಪ, ಪ್ರಿಯಾಂಕ್ ಖರ್ಗೆ, ಹಾಗೂ ಸಂಬಂಧಿಸಿದ ಇಲಾಖೆಗಳ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು. ವಿಡಿಯೊ ಕಾನ್ಫರೆನ್ಸ್ ಮೂಲಕ ರಾಜ್ಯದ ವಿವಿಧ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಪಾಲ್ಗೊಂಡಿದ್ದರು.

**<><*<><>*><>**

ಭಾರತೀಯ ವಾಯುಪಡೆಯ ಬೆಂಗಳೂರಿನಲ್ಲಿರುವ ತಂತ್ರಾಂಶ ಅಭಿವೃದ್ಧಿ ಸಂಸ್ಥೆ-ಎಸ್‌ಡಿಐ, ವಾಯುಗಾಮಿ ಅನ್ವಯಿಕಗಳಿಗಾಗಿ ಜಂಟಿಯಾಗಿ ದೇಶೀಯ ಡಿಜಿಟಲ್ ಸಂವಹನ ವ್ಯವಸ್ಥೆಯನ್ನು ವಿನ್ಯಾಸ ಹಾಗೂ ಅಭಿವೃದ್ಧಿಪಡಿಸಲು ಮದ್ರಾಸಿನ ಐಐಟಿಯೊಂದಿಗೆ ಇಂದು ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿದೆ. ಸಂಸ್ಥೆಯ ಕಮಾಂಡೆಂಟ್ ಏರ್‌ಚೀಫ್ ಮಾರ್ಷಲ್ ಆರ್.ಗುರುಹರಿ, ಮದ್ರಾಸ್ ಐಐಟಿ ನಿರ್ದೇಶಕ ಪ್ರೊಫೆಸರ್ ವಿ.ಕಾಮಕೋಟಿ ಹಾಗೂ ಪ್ರವರ್ತಕ್ ಟೆಕ್ನಾಲಿಜೀಸ್ ಫೌಂಡೇಶನ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ.ಎಂ.ಜೆ.ಶಂಕರ್ ರಾಮನ್ ತಿಳಿವಳಿಕೆ ಪತ್ರಗಳಿಗೆ ಸಹಿ ಹಾಕಿದರು. ಈ ಸಹಯೋಗವು ಆತ್ಮ ನಿರ್ಭರ ಭಾರತದ ದೃಷ್ಟಿಕೋನವನ್ನು ಸಾಕಾರಗೊಳಿಸುವ, ರಕ್ಷಣಾ ತಂತ್ರಜ್ಞಾನದಲ್ಲಿ ಸ್ವಾವಲಂಬನೆಯನ್ನು ಬೆಳೆಸುವ ಮತ್ತು ಕಾರ್ಯತಂತ್ರದ ಸಾಮರ್ಥ್ಯಗಳನ್ನು ಹೆಚ್ಚಿಸುವ ಮಹತ್ವದ ಹೆಜ್ಜೆಯಾಗಿದೆ. ಈ ತಂತ್ರಜ್ಞಾನವನ್ನು ಸ್ಥಳೀಯವಾಗಿ ಅಭಿವೃದ್ಧಿಪಡಿಸುವ ಮೂಲಕ ಆಮದು ಮಾಡಿಕೊಂಡ ವ್ಯವಸ್ಥೆಗಳ ಮೇಲಿನ ಅವಲಂಬನೆ ಕಡಿಮೆ ಮಾಡಲು, ತಾಂತ್ರಿಕ ಸ್ವಾವಲಂಬನೆ ಮತ್ತು ರಕ್ಷಣಾ ಪಡೆಗಳ ಕಾರ್ಯಾಚರಣೆಯ ದಕ್ಷತೆಯನ್ನು ಹೆಚ್ಚಿಸಲು ಪ್ರಯತ್ನಿಸುತ್ತದೆ. ಈ ಸಂದರ್ಭದಲ್ಲಿ ಮಾತನಾಡಿದ ಎಸ್‌ಡಿಐ ಸಂಸ್ಥೆಯ ಕಮಾಂಡೆಂಟ್ ಏರ್‌ಚೀಫ್ ಮಾರ್ಷಲ್ ಆರ್.ಗುರುಹರಿ, ಐಐಟಿ ಮದ್ರಾಸ್ ಜೊತೆಗಿನ ಈ ಪಾಲುದಾರಿಕೆಯು ನಿರ್ಣಾಯಕ ರಕ್ಷಣಾ ಸಂವಹನ ತಂತ್ರಜ್ಞಾನಗಳಲ್ಲಿ ಸಂಪೂರ್ಣ ಸ್ವಾವಲಂಬನೆಯನ್ನು ಸಾಧಿಸುವ ನಿಟ್ಟಿನಲ್ಲಿ ಒಂದು ದೂರದ ಹೆಜ್ಜೆಯಾಗಿದೆ ಎಂದರು. ಕಾರ್ಯಾಚರಣೆಯ ಪರಿಣತಿಯೊಂದಿಗೆ ಶೈಕ್ಷಣಿಕ ಶ್ರೇಷ್ಠತೆಯನ್ನು ಸಂಯೋಜಿಸುವ ಮೂಲಕ ವಾಯುಗಾಮಿ ಪಡೆಗಳ ಸಾಮರ್ಥ್ಯಗಳನ್ನು ಗಮನಾರ್ಹವಾಗಿ ಹೆಚ್ಚಿಸಲು ಒತ್ತು ನೀಡಲಾಗುತ್ತಿದೆ ಎಂದು ಅವರು ಹೇಳಿದರು. ಮದ್ರಾಸ್ ಐಐಟಿ ನಿರ್ದೇಶಕ ಪ್ರೊಫೆಸರ್

ವಿ.ಕಾಮಕೋಟಿ ಮಾತನಾಡಿ, ಭಾರತೀಯ ವಾಯುಪಡೆಯ ತಂತ್ರಾಂಶ ಅಭಿವೃದ್ಧಿ ಸಂಸ್ಥೆಯೊಂದಿಗಿನ ಈ ಸಹಯೋಗವು, ಶೈಕಣಿಕ ಮತ್ತು ರಕ್ಷಣಾ ಸಂಸ್ಥೆಗಳ ನಡುವಿನ ಸಮನ್ವಯತೆಯನ್ನು ತೋರಿಸುತ್ತದೆ. ದೃಢವಾದ ಸ್ಥಳೀಯ ಪರಿಹಾರಗಳನ್ನು ರಚಿಸಲು ಸುಧಾರಿತ ಸಂವಹನ ತಂತ್ರಜ್ಞಾನ ಮತ್ತು ಸೈಬರ್ ಭದ್ರತೆಯಲ್ಲಿ ತನ್ನ ಪರಿಣತಿ ಕೊಡುಗೆ ನೀಡಲು ಐಐಟಿ ಮದ್ರಾಸ್ ಹೆಮ್ಮೆಪಡುತ್ತದೆ ಎಂದು ಹೇಳಿದರು.

<><*<><>*><>

ವಿಕಸಿತ ಭಾರತ 'ಜಿ ರಾಮ್ ಜಿ' ಕಾಯ್ದೆಯಿಂದ ರಾಜ್ಯಗಳಿಗೆ ಕಳೆದ ಏಳು ವರ್ಷಗಳ ಸರಾಸರಿ ಬಟವಡೆಗೆ ಹೋಲಿಸಿದಲ್ಲಿ ನಿವ್ವಳ ೧೭ ಸಾವಿರ ಕೋಟಿ ರೂಪಾಯಿ ಹೆಚ್ಚಾಗುವ ನಿರೀಕ್ಷೆಯಿದೆ. ರಾಜ್ಯಗಳಿಗೆ ಒಟ್ಟಾರೆ ನಿಧಿ ಹಂಚಿಕೆ ಉತ್ತಮಗೊಳ್ಳಲಿದೆ ಎಂದು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಸಂಶೋಧನಾ ವರದಿ ತಿಳಿಸಿದೆ. ಮನರೇಗಾ ಪುನರ್ ವಿನ್ಯಾಸಗೊಳಿಸಿ ತರಲಾದ ವಿಕಸಿತ ಭಾರತ ಜಿ ರಾಮ್ ಜಿ ಚೌಕಟ್ಟು ಪರಿವರ್ತನಾತ್ಮಕ ಅಭ್ಯಾಸ ಮತ್ತು ಕಾರ್ಯತಂತ್ರಗಳನ್ನು ಸಮಗ್ರಗೊಳಿಸಿದೆ. ಸ್ಪರ್ಧಾತ್ಮಕ ಯೋಜನಾ ಗುರುತು, ಉತ್ಪಾದಕ ಆಸ್ತಿ ಸೃಜನೆ, ಆದಾಯ ಹೆಚ್ಚಳ ಹಾಗೂ ದಕ್ಷ ಉಸ್ತುವಾರಿ ವ್ಯವಸ್ಥೆಯತ್ತ ಗಮನ ಕೇಂದ್ರೀಕರಿಸಲಾಗಿದೆ. ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆ, ಎಲ್ಲಾ ಹಂತಗಳಲ್ಲಿ ಉದ್ಯೋಗ ಸೃಷ್ಟಿ, ಪಾರದರ್ಶಕತೆ ಮತ್ತು ಉತ್ತರದಾಯಿತ್ವವನ್ನು ಬಲಪಡಿಸುತ್ತದೆ ಎಂದು ವರದಿ ತಿಳಿಸಿದೆ.

<><*<><>*><>

ವಿಶ್ವಮಾನವ ಕುವೆಂಪು ಜಯಂತಿಯನ್ನು ರಾಜ್ಯದ ವಿವಿಧೆಡೆ ಇಂದು ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕುವೆಂಪು ಎಂದೇ ಪ್ರಸಿದ್ಧರಾದ ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ ಅವರಿಗೆ ಗೌರವನಮನ ಸಲ್ಲಿಸಿದ್ದಾರೆ. ಸಾಹಿತಿ, ಸಮಾಜ ಸುಧಾರಕ, ದಾರ್ಶನಿಕ ಎಲ್ಲವೂ ಆಗಿದ್ದ ಕುವೆಂಪು ನಮ್ಮೆಲ್ಲರಲ್ಲಿ ವೈಚಾರಿಕ ಪ್ರಜ್ಞೆ ಮೂಡಿಸಿ ಅರಿವಿನ ಕಣ್ಣಲ್ಲಿ ಲೋಕ ನೋಡಲು ಕಲಿಸಿದ ಗುರು ಎಂದು ಸಾಮಾಜಿಕ ಜಾಲತಾಣದಲ್ಲಿ ಸ್ಮರಿಸಿದ್ದಾರೆ. ಸಾವಿಲ್ಲದ ಅವರ ವಿಚಾರಧಾರೆಯನ್ನು ಮನನ ಮಾಡಿಕೊಂಡು, ಬದುಕುವುದೇ ಈ ಅರಿವಿನ ಗುರುವಿಗೆ ನಾವು ಸಲ್ಲಿಸುವ ಹುಟ್ಟುಹಬ್ಬದ ಗೌರವವಾಗಿದೆ ಎಂದು ಅವರು ತಿಳಿಸಿದ್ದಾರೆ. "ಎಲ್ಲಾದರು ಇರು, ಎಂತಾದರು ಇರು, ಎಂದೆಂದಿಗೂ ನೀ ಕನ್ನಡವಾಗಿರು." ಎಂಬ ಸಂದೇಶ ನೀಡುವ ಮೂಲಕ ರಸಋಷಿ ಕುವೆಂಪು ನಮ್ಮ ಸಂಕುಚಿತ ಭಾವನೆಗಳನ್ನು ಮೀರಿ, ಮನುಷ್ಯತ್ವದ ಹಾದಿಯಲ್ಲಿ ಸಾಗುವ ದಾರಿದೀಪವನ್ನು ತೋರಿದ್ದಾರೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಾಮಾಜಿಕ ಮಾಧ್ಯಮದಲ್ಲಿ ಹೇಳಿದ್ದಾರೆ. ಮೊದಲ ಜ್ಞಾನಪೀಠ ಪ್ರಶಸ್ತಿಯನ್ನು ಕನ್ನಡ ಸಾಹಿತ್ಯದ ಮುಕುಟಕ್ಕೇರಿಸಿದ ಮಹಾನ್ ರಾಷ್ಟ್ರಕವಿ ಎಂದು ಸಚಿವರು ಬಣ್ಣಿಸಿದ್ದಾರೆ. ವಿಶ್ವಮಾನವ ಕುವೆಂಪು ಜಯಂತಿ ಹಿನ್ನೆಲೆಯಲ್ಲಿ ಮಂಡ್ಯ ನಗರದ ರೈತ ಭವನದ ಮುಂಭಾಗ ಇರುವ ರಾಷ್ಟ್ರಕವಿ ಕುವೆಂಪು ಪುತ್ಥಳಿಗೆ ಜಿಲ್ಲಾಡಳಿತದ ವತಿಯಿಂದ ಮಾಲಾರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ, ಜಿಲ್ಲಾ ಪಂಚಾಯತ್ ಸಿಇಒ ನಂದಿನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಉಪಸ್ಥಿತರಿದ್ದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ರಾಷ್ಟ್ರಕವಿ ಕುವೆಂಪು ಅವರ ೧೨೧ನೇ ಜನ್ಮ ದಿನವನ್ನು ವಿಶ್ವಮಾನವ ದಿನವನ್ನಾಗಿ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಶಿರಸ್ತೇದಾರ್ ವಿನೋದ್ ಅವರು ರಾಷ್ಟ್ರಕವಿ ಕುವೆಂಪು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದರು. ತಮ್ಮ ಅಪಾರವಾದ ಸಾಹಿತ್ಯ ಕೃಷಿಯಿಂದ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಕೀರ್ತಿ ತಂದ ಕುವೆಂಪು ಅವರ ವಿಶ್ವ ಮಾನವ ಸಂದೇಶ ಸದಾ ಕಾಲಕ್ಕೂ ಪ್ರಸ್ತುತವಾಗಿದೆ ಎಂದು ಕುವೆಂಪು ಅವರು ಕನ್ನಡ ಸಾಹಿತ್ಯಕ್ಕೆ ನೀಡಿರುವ ಕೊಡುಗೆಯನ್ನು ಸ್ಮರಿಸಿದರು.

<><*<><>*><>

ನಮ್ಮ ಮನಸ್ಸನ್ನು ಬೇರೆಡೆ ಸೆಳೆಯುವ ಶಕ್ತಿಗಳನ್ನು ಮಟ್ಟ ಹಾಕುವ ಕೆಲಸವನ್ನು ವಿಜ್ಞಾನ ಮತ್ತು ತಂತ್ರಜ್ಞಾನದಿಂದ ಮಾಡಬೇಕಿದೆ ಎಂದು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವ ಶರಣಬಸಪ್ಪ ದರ್ಶನಾಪುರ್ ಹೇಳಿದ್ದಾರೆ. ಅವರು ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಸಂಶೋಧನಾ ಪರಿಷತ್ತು

ಆಯೋಜಿಸಿರುವ ರಾಜ್ಯಮಟ್ಟದ ಐದನೇ ವಿಜ್ಞಾನ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು. ಜಗತ್ತು ವಿಜ್ಞಾನ ಮತ್ತು ತಂತ್ರಜಾನದ ಹಿಂದೆ ಅನುಸರಿಸಿ ಮುನ್ನಡೆಯುತ್ತಿದೆ. ಈ ನಿಟ್ಟಿನಲ್ಲಿ ನಾವು ಮುಂದೆ ಸಾಗಿ, ಯಶಸ್ಸು ಸಾಧಿಸಬೇಕು ಎಂದರು. ಪರಿಷತ್ತಿನ ಮಹಾಪೋಷಕರೂ ಆಗಿರುವ ವಿಜ್ಞಾನಿ ಡಾ.ಎ.ಎಸ್. ಕಿರಣ್ ಕುಮಾರ್ ಮಾತನಾಡಿ, ರಾಜ್ಯದ ಎಲ್ಲ ಮಕ್ಕಳಿಗೆ ವಿಜ್ಞಾನದ ವಿಚಾರಗಳನ್ನು ತಲುಪಿಸುವ ಅವಶ್ಯವಿದೆ. ಭಾರತ ಜಗತ್ತಿನ ಮೊದಲ ಸ್ಥಾನದಲ್ಲಿ ಬರಬೇಕಾದರೆ ವಿಜ್ಞಾನದ ಬೆಳವಣಿಗೆ ಅತ್ಯಗತ್ಯವಾಗಿದೆ. ವೈಜ್ಞಾನಿಕ ಚಿಂತನೆಗಳನ್ನು ಮಕ್ಕಳಿಂದ ಹಿರಿಯರವರೆಗೆ ತಿಳಿಸುವಂತಹ ಇಂತಹ ಕಾರ್ಯಕ್ರಮಗಳಿಗೆ ರಾಜ್ಯ ಸರ್ಕಾರವು ತನ್ನ ಬಜೆಟ್‌ನಲ್ಲಿ  ೫ ಕೋಟಿ ಅನುದಾನ ಮೀಸಲಿಟ್ಟು ತನ್ನ ಕಾಣಿಕೆಯನ್ನು ಕೊಡಬೇಕು ಎಂದರು. ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷ ಹುಲಿಕಲ್ ನಟರಾಜ್ ಮಾತನಾಡಿ, ಸರ್ಕಾರ ಈ ವರ್ಷದ ಬಜೆಟ್‌ನಲ್ಲಿ ಒಂದಿಷ್ಟು ಅನುದಾನವನ್ನು ಸಮ್ಮೇಳನಕ್ಕೆ ಕೊಡಬೇಕು ಎಂದು ಕೋರಿದರು.

**<><*<><>*><>**

ಬೆಂಗಳೂರು        ನಗರದ ವಿವಿಧೆಡೆ ನಡೆಯುವ ಹೊಸ ವರ್ಷ ಸಂಭ್ರಮಾಚರಣೆ ವೇಳೆ ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಅಗತ್ಯ ಮುಂಜಾಗ್ರತಾ ಕ್ರಮ ವಹಿಸಲು ಸೂಚನೆ ನೀಡಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ನಗರದಲ್ಲಿ ಹೊಸ ವರ್ಷ ಸಂಭ್ರಮಾಚರಣೆಯ ಕರ್ತವ್ಯಕ್ಕೆ ಒಟ್ಟು ೨೦ ಸಾವಿರ ಪೊಲೀಸರನ್ನು ನಿಯೋಜಿಸಲಾಗುತ್ತಿದೆ. ಕಾನೂನು ಸುವ್ಯವಸ್ಥೆ ೧೪ ಸಾವಿರ ಪೊಲೀಸರು, ೨೫೦೦ ಟ್ರಾಫಿಕ್ ಪೊಲೀಸರು, ೮೮ ಕೆಎಸ್‌ಆರ್‌ಪಿ ಪ್ಲಟೂನ್ಸ್, ೨೧ ಸಿಎಆರ್, ೨೬೬ ಹೊಯ್ಸಳ ವಾಹನ, ೨೫೦ ಕೋಬ್ರ ವಾಹನಗಳನ್ನು ನಿಯೋಜಿಸಲಾಗುತ್ತಿದೆ. ೪೦೦ ಟ್ರಾಫಿಕ್ ವಾರ್ಡನ್‌ಗಳನ್ನು ನಿಯೋಜಿಸಲಾಗುತ್ತಿದೆ ಎಂದು ಸಚಿವರು ವಿವರಿಸಿದ್ದಾರೆ. ಜನ ದಟ್ಟಣೆ ನಿಯಂತ್ರಿಸಲು ವಾಟರ್ ಜೆಟ್ಸ್ ಸೇರಿದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದ್ದು, ಸಿವಿಲ್ ಡಿಫೆನ್ಸ್, ಹೋಮ್ ಗಾರ್ಡ್ಸ್ ಸೇರಿದಂತೆ ಒಟ್ಟು ೨೦ ಸಾವಿರ ಪೊಲೀಸರನ್ನು ನಿಯೋಜಿಸಲಾಗುವುದು ಎಂದು ತಿಳಿಸಿದ್ದಾರೆ. ಹೊಸ ವರ್ಷದ ಆಚರಣೆಯಲ್ಲಿ ಹೆಚ್ಚಿನ ಜನ ಭಾಗವಹಿಸುತ್ತಿದ್ದಾರೆ. ಕಳೆದ ವರ್ಷ ೮ ಲಕ್ಷಕ್ಕು ಹೆಚ್ಚು ಜನರು ಸಂಭ್ರಮಾಚರಣೆಗಳಲ್ಲಿ ಭಾಗವಹಿಸಿದ್ದರು. ಎಂ.ಜಿ.ರಸ್ತೆ, ಬ್ರಿಗೇಡ್ ರೋಡ್, ಇಂದಿರಾನಗರ, ಕೋರಮಂಗಲ, ಎಲೆಕ್ಟ್ರಾನಿಕ್ ಸಿಟಿಯ ನೀಲಾದ್ರಿ ರಸ್ತೆಯನ್ನು ಹೆಚ್ಚು ಜನ ಸೇರುವ ಸ್ಥಳಗಳೆಂದು ಗುರುತಿಸಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಾಹಿತಿ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**